ದಿನಾಂಕ 14-10-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿಗಳ ಪರ ವಕೀಲರಿಂದ**

ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ವಕೀಲರು ನನಗೆ ಗೊತ್ತಿರುವ ಭಾಷೆಯಲ್ಲಿ ಓದಿ ಹೇಳಿರುತ್ತಾರೆ. ಆದ್ದರಿಂದ ನಾನು ಹಾಜರುಪಡಿಸಿದ ದಾಖಲೆಗಳನ್ನು ನಿಶಾನೆಗೊಳಿಸಲು ವಿನಂತಿ.

ದಿನಾಂಕ 15-04-1993 ರ ಕ್ರಯ ಪತ್ರದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಎರಡು ಕೈಬರಹದ ಪಹಣಿಗಳನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಗಳನ್ನು ನಿಪಿ-2 ಮತ್ತು 3 ಎಂದು ಗುರುತಿಸಲಾಯಿತು. ಒಂದು ಮುಟೇಷನನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ಎರಡು ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಗಳನ್ನು ನಿಪಿ-5 ಮತ್ತು 6 ಎಂದು ಗುರುತಿಸಲಾಯಿತು.

**ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೇಳಿದ್ದರಿಂದ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ.ಇದೆ.

ಸಿವಿಲ್ ನ್ಯಾಯಾಧೀಶರು
ಜೇವರ್ಗಿ